ಉದ್ಯೋಗ ಭರವಸೆ ಯೋಜನೆಯಲ್ಲಿ ಕ್ಷೇತ್ರ ಮಟ್ಟಕ್ಕೆ ಇಳಿಸುವುದು.

1558 - ಶ್ರೀ ಚಂದ್ರಶೇಖರ ನಾಯಕ್ (ಗೋಕಾಕ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉದ್ಯೋಗ ಭರವಸೆ ಯೋಜನೆಯು ತಾಲ್ಲೂಕು ಮಟ್ಟಕ್ಕೆ ಸೀಮಿತವಾಗಿರುವುದರಿಂದ ಎರಡು ಅಥವಾ ಮೂರು ಕ್ಷೇತ್ರಗಳಿರುವ ತಾಲ್ಲೂಕುಗಳಿಗೆ ಅನುದಾನ ಕಡಿಮೆಯಾಗುತ್ತಿದೆ, ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಕೇವಲ ಒಂದೇ ಕ್ಷೇತ್ರ ಇರುವ ತಾಲ್ಲೂಕು ಮತ್ತು ಹೆಚ್ಚು ತಾಲ್ಲೂಕುಗಳಿಂದ ಕ್ಷೇತ್ರಕ್ಕೆ ಇದರಿಂದ ಅಭಿವೃದ್ಧಿಯಡಿಯಲ್ಲಿ ತಾರತಮ್ಯವಾಗುವುದಿಲ್ಲವೆ?*

ಇ) *ಹಾಗಿದ್ದಲ್ಲಿ ಅದನ್ನು ಕ್ಷೇತ್ರ ಮಟ್ಟಕ್ಕೆ ಇಳಿಸುವ ವಿಚಾರ ಸರ್ಕಾರಕ್ಕಿದೆಯೇ?*

ಈ) *ಹಾಗಿದ್ದಲ್ಲಿ, ಎಂದಿನಿಂದ ಜಾರಿಗೆ ತರಲಾಗುವುದು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಇಲ್ಲಾ.

ಆ) ಈ ಯೋಜನೆಯಡಿಯಲ್ಲಿ ಒಂದು ತಾಲ್ಲೂಕಿನ ಒಂದು ಘಟಕವನ್ನಾಗಿ ಮಾಡಿರುತ್ತಾರೆ. ಕ್ಷೇತ್ರವಾರು ಘಟಕವನ್ನಾಗಿ ಮಾಡಿಲ್ಲದೇ ಇರುವುದರಿಂದ ಮತ್ತು ಎಲ್ಲಾ ಕಾಮಗಾರಿಗಳನ್ನು ಬೇಡಿಕೆ ಆಧಾರದ ಮೇಲೆ ತೆಗೆದುಕೊಳ್ಳಬೇಕಾಗಿರುವುದರಿಂದ ಒಂದು ತಾಲ್ಲೂಕಿನಿಂದ ಮತ್ತೊಂದು ತಾಲ್ಲೂಕಿಗೆ ಹಣ ಬಿಡುಗಡೆಯಲ್ಲಿ ವ್ಯತ್ಯಾಸ ಇರುವುದಿಲ್ಲ.

ಇ) ಈ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿರುವ ಕಾರಣ ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಕಾರ್ಯಗತ ಮಾಡಲಾಗುತ್ತಿದೆ. ಆದರಲ್ಲಿ ಕ್ಷೇತ್ರಮಟ್ಟಕ್ಕೆ ಇಳಿಸುವುದಕ್ಕೆ ಅವಕಾಶವಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಬಡಜನರಿಗೆ ವಿತರಿಸುವ ಶೌಚಾಲಯದಲ್ಲಿ ನಡೆದಿರುವ ಅವ್ಯವಹಾರ.

1560 - ಶ್ರೀ ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬಡಜನರಿಗೆ ವಿತರಿಸುವ ಶೌಚಾಲಯದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಅದರ ವಿವರಗಳೇನು?*

ಇ) *ಅವ್ಯವಹಾರ ನಡೆಸಿದ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಬಂದಿದೆ.

ಆ) ಕುದಾವರ ಮತ್ತು ತಿರುವೈಲ್ ಗ್ರಾಮಪಂಚಾಯತಿಯ ಕಾರ್ಯದರ್ಶಿಗಳು ಅನುಕ್ರಮವಾಗಿ ರೂ. 49500-00 ಹಾಗೂ 75500-00 ಗಳನ್ನು ದುರುಪಯೋಗ ಮಾಡಿರುವುದು ವಿಶೇಷ ಲೆಕ್ಕ ತಪಾಸಣೆಯಲ್ಲಿ ಕಂಡು ಬಂದಿದ್ದು, ಸದರಿಯವರ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗಿದೆ.

ಹುಬ್ಬಳ್ಳಿ - ಧಾರವಾಡ ಮಹಾನಗರದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಗ್ರಂಥಾಲಯಗಳು.

1561 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಇರುವ ಸರ್ಕಾರಿ ಮತ್ತು ಖಾಸಗಿ ಗ್ರಂಥಾಲಯಗಳ ಸಂಖ್ಯೆ ಎಷ್ಟು, ಅದಕ್ಕೆ ಮಂಜೂರು ಮಾಡುತ್ತಿರುವ ಅನುದಾನವೆಷ್ಟು?*

ಆ) *ಇನ್ನೂ ಹೆಚ್ಚಿನ ಗ್ರಂಥಾಲಯಗಳ ಅವಶ್ಯಕತೆ ಇರುವುದು ಸರ್ಕಾರದ ಮನಕ್ಕೆ ಬಂದಿದೆಯೇ?*

ಇ) *ಮಹಾನಗರದಲ್ಲಿರುವ ಗ್ರಂಥಾಲಯಗಳನ್ನು ಅಭಿವೃದ್ಧಿಪಡಿಸಲು ಹಾಗೂ ಇನ್ನು ಹೆಚ್ಚಿನ ಗ್ರಂಥಾಲಯಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :

ಅ) ಸರ್ಕಾರಿ - 27

ಖಾಸಗಿ - 01

ಖಾಸಗಿ ಗ್ರಂಥಾಲಯ ಶ್ರೀ ಸರಸ್ವತಿ ವಿದ್ಯಾರಣ್ಯ ಲೈಬ್ರರಿ, ಮರಾಠಗಲ್ಲಿ, ಹುಬ್ಬಳ್ಳಿ ಇಲ್ಲಿಗೆ 1997-98ನೇ ಸಾಲಿನಿಂದ ರೂ. 12,728-00 ಅನುದಾನ ನೀಡಲಾಗುತ್ತಿದೆ.

ಆ) ಬಂದಿದೆ.

ಇ) ನ್ಯಾಷನಲ್ ಇನ್‌ಫರ್‌ಮೇಷನ್ ಸೆಂಟರ್ ಮುಖಾಂತರ ಓದುಗರಿಗೆ ಹೆಚ್ಚಿನ ಸೇವಾ ಸೌಲಭ್ಯ ಒದಗಿಸಲು ಹಾಗೂ ಗಣಕೀಕರಣಗೊಳಿಸಲು ಯೋಜಿಸಲಾಗಿದೆ ಹಾಗೂ ಹುಬ್ಬಳ್ಳಿ ಧಾರವಾಡದ ಮಹಾನಗರಗಳಲ್ಲಿ ಪ್ರತಿ ನಗರಸಭೆ ವಾರ್ಡ್‌ಗೆ ಒಂದು ಗ್ರಂಥಾಲಯವನ್ನು ಪ್ರಾರಂಭಿಸುವ ಯೋಜನೆ ಇದೆ. ಇದನ್ನು ಹಂತ ಹಂತವಾಗಿ ಜಾರಿಗೊಳಿಸಲಾಗುವುದು.